**ದಿನಾಂಕ: 17/09/2021ರಂದು ಮೆ: ವಿ.ಐ.ಎನ್.ಪಿ. ಡಿಸ್ಟಿಲರೀಸ್ ಮತ್ತು ಶುಗರ್ಸ್ ಪ್ರೈ.ಲಿ. ಇವರು ಹಾವೇರಿ ಜಿಲ್ಲೆ ಶಿಗ್ಗಾಂವ ತಾಲ್ಲೂಕು ಕೋಣನಕೆರೆ ಗ್ರಾಮದ ಸರ್ವೇ ನಂ. 42, 43 ಮತ್ತು 53ರಲ್ಲಿ ಮೊಲಾಸಸ್ ಆಧಾರಿತ ಡ್ಯುಯಲ್ ಫೀಡ್ ಡಿಸ್ಟಿಲರೀ, ಸಕ್ಕರೆ, ಸಹ ವಿದ್ಯುತ್ ಮತ್ತು ವಿದ್ಯುತ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಿರುವ ಬಗ್ಗೆ ನಡೆದ ಪರಿಸರ ಸಾರ್ವಜನಿಕ ಆಲಿಕೆ ಸಭೆಯ ನಡವಳಿಗಳು:**

| | |
|---|---|
| ಪರಿಸರ ಸಾರ್ವಜನಿಕ ಸಭೆ ನಡೆದ ಸ್ಥಳ | : ಉದ್ದೇಶಿತ ಯೋಜನಾ ಸ್ಥಳ |
| ದಿನಾಂಕ | : 17/09/2021 |
| ಅಧ್ಯಕ್ಷತೆ | : ಎಸ್. ಬಿ. ಶೆಟ್ಟೆಣ್ಣವರ., ಭಾ.ಆ.ಸೇ.<br>ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,<br>ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ ಸಮಿತಿ,<br>ಹಾವೇರಿ ಜಿಲ್ಲೆ |
| ಹಾಜರಿದ್ದ ಅಧಿಕಾರಿಗಳ ವಿವರ | : **ಅನುಬಂಧ–1** |
| ಯೋಜನಾದಾರರ ವತಿಯಿಂದ ಹಾಜರಿದ್ದ ಪ್ರತಿನಿಧಿಗಳ ವಿವರ | : **ಅನುಬಂಧ–2** |
| ಭಾಗವಹಿಸಿದ ಸಾರ್ವಜನಿಕರ ವಿವರ | : **ಅನುಬಂಧ–3** |
| ಸಾರ್ವಜನಿಕರು ಲಿಖಿತ ರೂಪದಲ್ಲಿ ಸಲ್ಲಿಸಿದ ಅಭಿಪ್ರಾಯಗಳ ಪತ್ರಗಳು | : **ಅನುಬಂಧ–4** |

**ಪೀಠಿಕೆ:–**

ಮೆ: ವಿ.ಐ.ಎನ್.ಪಿ. ಡಿಸ್ಟಿಲರೀಸ್ ಮತ್ತು ಶುಗರ್ಸ್ ಪ್ರೈ.ಲಿ. ಇವರು ಹಾವೇರಿ ಜಿಲ್ಲೆ, ಶಿಗ್ಗಾಂವ ತಾಲ್ಲೂಕು, ಕೋಣನಕೆರೆ ಗ್ರಾಮದ ಸರ್ವೇ ನಂ. 42, 43 ಮತ್ತು 53ರ ಒಟ್ಟು 69 ಎಕರೆ ಪ್ರದೇಶದಲ್ಲಿ ಮೊಲಾಸಸ್ ಆಧಾರಿತ 300 ಕೆ.ಎಲ್.ಡಿ. ಸಾಮರ್ಥ್ಯದ ಡ್ಯುಯಲ್ ಫೀಡ್ ಡಿಸ್ಟಿಲರೀ, 3500 ಟಿಸಿಡಿ ಸಾಮರ್ಥ್ಯದ ಸಕ್ಕರೆ ಘಟಕ, 10 ಮೆಗಾ ವ್ಯಾಟ್ ಸಾಮರ್ಥ್ಯದ ಸಹ ವಿದ್ಯುತ್ ಉತ್ಪಾದನಾ ಘಟಕ ಮತ್ತು ಇನ್‌ಸಿನರೇಷನ್ ಬಾಯ್ಲರ್‌ನಿಂದ 4 ಮೆಗಾ ವ್ಯಾಟ್ ಸಾಮರ್ಥ್ಯದ ವಿದ್ಯುತ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲು ಉದ್ದೇಶಿಸಿರುತ್ತಾರೆ.

ಕೇಂದ್ರ ಪರಿಸರ ಮತ್ತು ಅರಣ್ಯ ಮಂತ್ರಾಲಯ, ಭಾರತ ಸರ್ಕಾರ ಇವರು ದಿನಾಂಕ: 14.09.2006 ರಂದು ಹೊರಡಿಸಿರುವ ಪರಿಸರ ಆಘಾತ ಅಂದಾಜೀಕರಣ ಅಧಿಸೂಚನೆ (ತಿದ್ದುಪಡಿ ದಿನಾಂಕ: 1.12.2009) ಪ್ರಕಾರ, ಸದರಿ ಯೋಜನೆಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವುದು ಕಡ್ಡಾಯವಾಗಿರುತ್ತದೆ. ಅದರಂತೆ, ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯ, ಭಾರತ ಸರ್ಕಾರ, ನವದೆಹಲಿ ಇವರು ಸದರಿ ಯೋಜನೆಯ Terms of References (ಟಿ.ಓ.ಆರ್) ಅನ್ನು

ಸಂ: IA-J-11011/69/2021-IA-II (I), ದಿನಾಂಕ: 11.03.2021ರಂತೆ ಅಂತಿಮಗೊಳಿಸಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯನ್ನು ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ಕೋರುವಂತೆ ಯೋಜನಾದಾರರಿಗೆ ತಿಳಿಸಿರುತ್ತಾರೆ. ಅದರಂತೆ ಈ ಯೋಜನೆಯ 'ಕರಡು ಪರಿಸರ ಆಘಾತ ಅಂದಾಜೀಕರಣ ವರದಿಯನ್ನು' ಹಾಗೂ ಇದರ ಕನ್ನಡ ಮತ್ತು ಇಂಗ್ಲೀಷ್ ಅವತರಣಿಕೆಯ ಸಂಕ್ಷಿಪ್ತ ವರದಿಯನ್ನು ಮಂಡಳಿಗೆ ಸಲ್ಲಿಸಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸುವಂತೆ ಮೆ: ವಿ.ಐ.ಎನ್.ಪಿ. ಡಿಸ್ಟಿಲರೀಸ್ ಮತ್ತು ಶುಗರ್ಸ್ ಪ್ರೈ.ಲಿ. ಇವರು ಕೋರಿಕೊಂಡಿರುತ್ತಾರೆ. ಈ ಹಿನ್ನೆಲೆಯಲ್ಲಿ ಸದರಿ ಯೋಜನೆಗೆ ಸಂಬಂಧಪಟ್ಟಂತೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು **ಉದ್ದೇಶಿತ ಯೋಜನಾ ಸ್ಥಳದಲ್ಲಿ ದಿನಾಂಕ: 17.09.2021 ರಂದು ಬೆಳಿಗ್ಗೆ 11:00 ಗಂಟೆಗೆ** ನಿಗದಿಪಡಿಸಲಾಗಿತ್ತು.

ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು, ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪತ್ರಿಕಾ ಪ್ರಕಟಣೆಯನ್ನು ರಾಜ್ಯ ಮಟ್ಟದ ಇಂಗ್ಲೀಷ್ ಪತ್ರಿಕೆಯಾದ **"ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್"** ಮತ್ತು ಕನ್ನಡ ಪತ್ರಿಕೆಯಾದ **"ವಿಜಯವಾಣಿ"** ದಿನ ಪತ್ರಿಕೆಗಳಲ್ಲಿ ದಿನಾಂಕ: 17.08.2021 ರಂದು ನೀಡಲಾಗಿರುತ್ತದೆ. ಅಲ್ಲದೇ ಸ್ಥಳೀಯರ ಮಾಹಿತಿಗಾಗಿ ಸ್ಥಳೀಯ ಕನ್ನಡ ದಿನ ಪತ್ರಿಕೆಯಾದ **"ಕೌರವ"** ದಿನಪತ್ರಿಕೆಯಲ್ಲೂ ಸಹ ದಿನಾಂಕ: 18.08.2021 ರಂದು ಪತ್ರಿಕಾ ಪ್ರಕಟಣೆ ನೀಡಲಾಗಿರುತ್ತದೆ. ಪತ್ರಿಕಾ ಪ್ರಕಟಣೆಯಲ್ಲಿ, ಯೋಜನಾ ಸ್ಥಳದಲ್ಲಿ ವಾಸವಿರುವ ಆಸಕ್ತ ನಿವಾಸಿಗಳು, ಪರಿಸರ ಆಸಕ್ತ ಗುಂಪುಗಳು ಮತ್ತು ಈ ಯೋಜನೆಯಿಂದ ತೊಂದರೆಗೊಳಗಾಗಬಹುದಾದ ಸಾರ್ವಜನಿಕರು ತಮ್ಮ ಸಲಹೆ, ಅನಿಸಿಕೆ, ಅಭಿಪ್ರಾಯ, ಟೀಕೆ-ಟಿಪ್ಪಣಿ ಹಾಗೂ ಅಹವಾಲುಗಳನ್ನು ಮೌಖಿಕವಾಗಿ/ಲಿಖಿತ/ಇ-ಮೇಲ್ ಮೂಲಕ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ/ಅಧ್ಯಕ್ಷರು, ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ ಸಮಿತಿ (ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ) ಇವರಿಗೆ, ಅಧಿಸೂಚನೆ ಪ್ರಕಟವಾದ 30 ದಿನಗಳೊಳಗೆ ಸಲ್ಲಿಸುವಂತೆ ತಿಳಿಸಲಾಗಿತ್ತು.

ಯೋಜನೆಯ ಪರಿಸರ ಆಘಾತ ಅಂದಾಜೀಕರಣ ವರದಿ ಹಾಗೂ ಕಾರ್ಯಕಾರಿ ಸಾರಾಂಶಗಳ ವರದಿಗಳನ್ನು ಸಾರ್ವಜನಿಕರ ಪರಾಮರ್ಶೆಗಾಗಿ ಜಿಲ್ಲಾಧಿಕಾರಿಗಳ ಕಛೇರಿ, ಹಾವೇರಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತ್, ಹಾವೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಹಾವೇರಿ, ಗ್ರಾಮ ಪಂಚಾಯತ್ ಕಾರ್ಯಾಲಯ, ಕೋಣನಕೆರೆ ಗ್ರಾಮ, ಪ್ರಾದೇಶಿಕ ಹಿರಿಯ ಪರಿಸರ ಅಧಿಕಾರಿಗಳ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಧಾರವಾಡ, ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಹಾವೇರಿ, ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ (ದಕ್ಷಿಣ ವಲಯ ಕಛೇರಿ), ಬೆಂಗಳೂರು ಹಾಗೂ ಸಹಾಯ ಕೇಂದ್ರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಕೇಂದ್ರ ಕಛೇರಿ, ಬೆಂಗಳೂರು ಈ ಸ್ಥಳಗಳಲ್ಲಿ ಇಡಲಾಗಿತ್ತು.

ದಿನಾಂಕ: 17.09.2021 ರಂದು ಬೆಳಿಗ್ಗೆ 11:00 ಗಂಟೆಗೆ ಹಾವೇರಿ ಜಿಲ್ಲೆ, ಶಿಗ್ಗಾಂವ ತಾಲ್ಲೂಕು, ಕೋಣನಕೆರೆ ಗ್ರಾಮದ ಉದ್ದೇಶಿತ ಯೋಜನಾ ಸ್ಥಳದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸಲಾಯಿತು. ಶ್ರೀ ಎಂ. ಎಸ್. ಮಹೇಶ್ವರಪ್ಪ, ಪರಿಸರ ಅಧಿಕಾರಿಗಳು, ಪ್ರಾದೇಶಿಕ ಕಛೇರಿ,